ಶ್ರೀ ಎಸ್. ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಇಲಾಖೆಯಿಂದ ರಾಜ್ಯದಲ್ಲಿ ಸರ್ಕಾರದ ಕೈಗಾರಿಕಾ ಕೇಂದ್ರಗಳಲ್ಲಿ ಖಾಸಗಿ ವಲಯದವರ ಸಹಕಾರದಿಂದ ಸರ್ಕಾರದ ಸವಲತ್ತುಗಳನ್ನು ವೃದ್ಧಿಸಿ ಅವರಿಗೆ ತರಬೇತಿ ಕೊಡುವ ಸರ್ಕಾರದ ಯೋಜನೆಗಳು ಯಾವುದೂ ಇಲ್ಲ.

ಆ) ಉದ್ಭವಿಸುವುದಿಲ್ಲ.

ಗಿರಿಜನರಿಗೆ ವಿದ್ಯುತ್ ಮತ್ತು ರಸ್ತೆ ವ್ಯವಸ್ಥೆ

4780 - ಶ್ರೀ ಕೆ. ಪ್ರಭಾಕರ ಬಂಗೇರ (ಬೆಳ್ತಂಗಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕು ನೆರಿಯ ಗ್ರಾಮದ ಕೊಲೋಡಿ ಗಿರಿಜನರಿಗೆ ವಿದ್ಯುತ್ ಹಾಗೂ ರಸ್ತೆ ಸಂಪರ್ಕ ಅವ್ಯವಸ್ಥಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಈ ಕಾಲೋನಿಗೆ ವಿದ್ಯುತ್ ಸಂಪರ್ಕ ಒದಗಿಸುವ ಬಗ್ಗೆ 1996-97ನೇ ಸಾಲಿನಲ್ಲಿ ಅಂದಾಜು ಪಟ್ಟಿಯನ್ನು ತಯಾರಿಸಿ, ಸದರಿ ಲೈನ್ ಎಸ್ಟಿಮೇಟ್‌ಗೆ ಮಂಜೂರು ಆಗಿರುತ್ತದೆ. ಈ ವಿದ್ಯುತ್ ಸಂಪರ್ಕಕ್ಕಾಗಿ ಖಾಸಗೀ ಜಮೀನಿನಲ್ಲಿ ವಿದ್ಯುತ್ ಲೈನ್ ಹಾದುಹೋಗಬೇಕಾಗಿರುವ ಪ್ರಯುಕ್ತ ಖಾಸಗಿ ಜಮೀನನ್ನು ಸ್ವಾದೀನಪಡಿಸಿಕೊಳ್ಳಲು ಅಂದಾಜು ವೆಚ್ಚ ತಯಾರಿಸುವ ಕಾರ್ಯ ಪ್ರಗತಿಯಲ್ಲಿದ್ದು, ಭೂಸ್ವಾಧೀನದ ನಂತರ ವಿದ್ಯುತ್ ರಸ್ತೆ ಸಂಪರ್ಕ ಕಲ್ಪಿಸಲಾಗುವುದು.

ಕೆ.ಎಸ್.ಎಸ್.ಐ.ಡಿ.ಸಿ.ಯಿಂದ ಸಾಲ

4782 - ಶ್ರೀ ರಾಮದಾಸ್ ವಿ. (ಕೃಷ್ಣರಾಜ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಎಸ್.ಎಸ್.ಐ.ಡಿ.ಸಿ. ಯಿಂದ ಕಳೆದ 3 ವರ್ಷಗಳಲ್ಲಿ ಎಷ್ಟು ಸಾಲ ನೀಡಲಾಗಿದೆ? ಹತ್ತು ಲಕ್ಷ ರೂ.ಗಳಿಗಿಂತ ಹೆಚ್ಚು ಮೊತ್ತದ ಸಾಲದ ವಿವರಣೆ ನೀಡುವುದು?

ಆ) ಕಳೆದ ವರ್ಷಗಳಲ್ಲಿ ಎಷ್ಟು ಸಾಲ ಮರುಪಾವತಿ ಆಗಿದೆ?

ಇ) ಪ್ಲೋರಿಕಲ್ಚರ್ ಉದ್ಯಮಕ್ಕೆ ಎಷ್ಟು ಸಾಲ ನೀಡಲಾಗಿದೆ? ಮರುಪಾವತಿ ಪ್ರಮಾಣ ಎಷ್ಟು?